ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

ಸಿ.ಸಿ.586/2021

| | |
|---|---|
| ಸಿ.ಡಬ್ಲ್ಯೂ : | 1 |
| ಪಿ.ಡಬ್ಲ್ಯೂ : | 1 |

| | | |
|---|---|---|
| ಸಾಕ್ಷಿದಾರರ ಹೆಸರು | : | ನಾಗಮ್ಮ |
| ತಂದೆ/ ಪತಿಯ ಹೆಸರು | : | ನರಸಿಂಹಮೂರ್ತಿ |
| ವಯಸ್ಸು | : | 58 ವರ್ಷ |
| ವೃತ್ತಿ | : | ವ್ಯವಸಾಯ |
| ವಾಸ | : | ಗೊಬ್ಬರಗಾಲ ಗ್ರಾಮ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 05.02.2025**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನಾನು ಆರೋಪಿಯನ್ನು ಈ ದಿವಸವೇ ಮೊದಲನೆ ಬಾರಿಗೆ ನೋಡುತ್ತಿದ್ದೇನೆ. ಸುಮಾರು 4 ವರೆ ವರ್ಷಗಳ ಹಿಂದೆ ನನ್ನ ಮಗ ಕರೆನ್ಸಿ ಹಾಕಿಸಿಕೊಂಡು ಸೈಕಲ್ ನಲ್ಲಿ ಮನೆಗೆ ಬರುತ್ತಿದ್ದಾಗ ಸೈಕಲ್ ಗೂ ಮತ್ತು ಬಸ್ಸಿಗೂ ಅಪಘಾತ ಆಗಿದ್ದು ಇದರಿಂದ ನನ್ನ ಮಗನ ಎಡಗಡೆ ಕಾಲಿಗೆ ಗಾಯಗಳು ಆಗಿರುತ್ತವೆ. ನಂತರ ಆಂಬ್ಯೂಲೆನ್ಸ್ ನಲ್ಲಿ ನನ್ನ ಮಗನನ್ನು ಮಂಡ್ಯ ಜಿಲ್ಲಾ ಆಸ್ಪತ್ರೆಗೆ ನಿಂಗೇಗೌಡರು ಕರೆದುಕೊಂಡು ಹೋಗಿರುತ್ತಾರೆ. ನಂತರ ನಾನು ಪೊಲೀಸ್ ಠಾಣೆಯಲ್ಲಿ ದೂರನ್ನು ನೀಡಿರುತ್ತೇನೆ. ಸಾಕ್ಷಿಗೆ ಈಗ ದೂರನ್ನು ತೋರಿಸಿದ್ದು, ಅದರಲ್ಲಿ ಇರುವ ಅವರ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಭಾಗಾಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

<u>ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ</u>

ಬಸ್ಸಿನ ಸಂಖ್ಯೆ KA-11F 0237 ಇರುತ್ತದೆ ಎಂದರೆ ಸರಿ. ನನ್ನ ಮಗನ ಎಡ ಮಂಡಿಗೆ ಎಡಗಡೆ ತೋಳಿಗೆ ಪೆಟ್ಟಾಗಿರುತ್ತದೆ ಎಂದರೆ ಸರಿ. ನನ್ನ ಮಗನ ಎಡ ಮಂಡಿಗೆ ತೀವ್ರ ಗಾಯವಾಗಿ ಶಸ್ತ್ರ ಚಿಕಿತ್ಸೆ ಆಗಿರುತ್ತದೆ ಎಂದರೆ ಸರಿ.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದ</u>

ನನ್ನ ವಾಸ ಗೊಬ್ಬರಗಾಲ ಇರುತ್ತದೆ ಎಂದರೆ ಸರಿ. ಆರೋಪಿಯ ಊರು ಶಾಂತಿಕೊಪ್ಪಲು ಇರುತ್ತದೆ ಎಂದರೆ ಸರಿ. ಶಾಂತಿಕೊಪ್ಪಲಿಗೂ ಗೊಬ್ಬರಗಾಲಕ್ಕೂ  ಸುಮಾರು 2 ಕಿ.ಮಿ ಅಂತರ ಇರುತ್ತದೆ ಎಂದರೆ ಸರಿ.

ನಾನು ಓದಿರುವುದಿಲ್ಲ. ಅಪಘಾತ ಆದ ದಿನಾಂಕ ನನಗೆ ನೆನಪಿಲ್ಲ. ಅಪಘಾತ ಆದಾಗ ಸಮಯ ಸಂಜೆ 7.30 ರಿಂದ 8.00 ಗಂಟೆ ಆಗಿರಬಹುದು. ಆ ಸಂದರ್ಭದಲ್ಲಿ ಕತ್ತಲೆ ಇದ್ದು ಒಬ್ಬರ ಮುಖ ಒಬ್ಬರಿಗೆ ಕಾಣಿಸುತ್ತಿರಲಿಲ್ಲ ಎಂದರೆ ಸರಿ. ಅಪಘಾತವು ಎಲ್ಲಿ ಆಗಿರುತ್ತದೆ ಎನ್ನುವ ಪ್ರಶ್ನೆಗೆ ಸಾಕ್ಷಿಯು ಅರಕೆರೆಯಲ್ಲಿರುವ ರವಿ ಅಣ್ಣನವರ ಅಂಗಡಿಯ ಮುಂದೆ ಎಂದು ನುಡಿಯುತ್ತಾರೆ.  ನೀವು  ಅಪಘಾತ ಸ್ಥಳಕ್ಕೆ ಬಂದಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ನಾನು ಬರುವಷ್ಟರಲ್ಲಿ ನನ್ನ ಮಗನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು ಎಂದು ನುಡಿಯುತ್ತಾರೆ.  ಅಪಘಾತ ಆದ 2-3 ದಿನಗಳ  ನಂತರ ನಾನು ಅರಕೆರೆ ಪೊಲೀಸ್ ಠಾಣೆಯಲ್ಲಿ ದೂರನ್ನು ನೀಡಿರುತ್ತೇನೆ. ಪೊಲೀಸ್ ಠಾಣೆಯಲ್ಲಿ ಹೇಳಿಕೆ ನೀಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ.

ಆರೋಪಿಯೇ ನನ್ನ ಮಗನನ್ನು ಆಸ್ಪತ್ರೆಗೆ ಕರೆದುಕೊಂಡು  ಹೋಗಿ ಸೇರಿಕೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಗೆ ಈಗ ನಿಪಿ.1 ಅನ್ನು ತೋರಿಸಿ ನಿಪಿ.1 ರಲ್ಲಿ ಸಹಿ ಮಾಡಿರುವುದನ್ನು ಹೊರತುಪಡಿಸಿ ನಿಮಗೆ ಓದಲು ಬರೆಯಲು ಬರುವುದಿಲ್ಲ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ನಿಪಿ.1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ.  ಮೋಟಾರು ವಾಹನ ಕಾಯ್ದೆ ಅಡಿಯಲ್ಲಿ ಪರಿಹಾರಕ್ಕಾಗಿ ಕೇಸನ್ನು ದಾಖಲಿಸಿರುತ್ತೇವೆ. ಪರಿಹಾರ ಪಡೆಯುವ ಸಲುವಾಗಿ ನಾನು ಈ ದಿನ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.